# ಮಂಗಳೂರು ನಗರ ಪೊಲೀಸ್ ಪತ್ರಿಕಾ ಪ್ರಕಟಣೆ

## ಗಾಂಜಾ ಮಾರಾಟ ಪ್ರಕರಣದ ಪ್ರಮುಖ ವಾರಂಟ್ ಅಸಾಮಿಯ ಸೆರೆ

ಸೆನ್ ಕ್ರೈಂ ಪೊಲೀಸ್ ಠಾಣಾ ಅ.ಕ್ರ 31/2021 ಕಲಂ: 8 (c) 20(b) (ii) (b) NDPS Act ಪ್ರಕರಣವು ದಿನಾಂಕ:28-06-2021 ರಂದು ದಾಖಲಾಗಿದ್ದು, 2 ನೇ ಆರೋಪಿ ಅಬ್ದುಲ್ ರಹಿಮಾನ್ ಗೆ ಪ್ರಕರಣದ ಪ್ರಮುಖ ಆರೋಪಿಯಾದ ಮುನ್ನ ಸಾಹು ಎಂಬಾತನು 3 ಕೆಜಿ 235 ಗ್ರಾಂ ಮಾಧಕ ವಸ್ತು ಗಾಂಜಾ ನೀಡಿದ್ದು, 02 ವರ್ಷಗಳಿಂದ ತಲೆಮರೆಸಿಕೊಂಡಿದ್ದ ಪ್ರಮುಖ ಆರೋಪಿ ಒಡಿಸ್ಸಾದ ಮುನ್ನ ಸಾಹು ಎಂಬವನನ್ನು ಸೆನ್ ಕ್ರೈಂ ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಸಿಬ್ಬಂದಿಯವರನ್ನು ವಿಶೇಷ ಕರ್ತವ್ಯದಲ್ಲಿ ಒಡಿಸ್ಸಾ ರಾಜ್ಯಕ್ಕೆ ತೆರಳಿ ಆರೋಪಿಯನ್ನು ಪತ್ತೆಮಾಡಿ ಒಡಿಸ್ಸಾದಲ್ಲಿ ದಸ್ತಗಿರಿ ಮಾಡಿ ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಂಗಳೂರು ಇಲ್ಲಿಗೆ ದಿನಾಂಕ:25-04-2023 ರಂದು ಹಾಜರುಪಡಿಸಿದ್ದು, ಆರೋಪಿಗೆ ಮಾನ್ಯ ನ್ಯಾಯಾಲಯವು ಪ್ರಸ್ತುತ ನ್ಯಾಯಾಂಗ ಬಂಧನ ವಿಧಿಸಿದೆ.

ಈ ಪ್ರಕರಣದಲ್ಲಿನ ಆರೋಪಿ ಪತ್ತೆ ಕಾರ್ಯದಲ್ಲಿ ಮಂಗಳೂರು ನಗರ ಮಾನ್ಯ ಪೊಲೀಸ್ ಆಯುಕ್ತರು ಶ್ರೀ ಕುಲದೀಪ್ ಕುಮಾರ್ ಆರ್ ಜೈನ್ ರವರ ಮಾರ್ಗದರ್ಶನದಂತೆ, ಸಿಸಿಬಿ ಘಟಕದ ಎಸಿಪಿಯವರಾದ ಶ್ರೀ ಪಿ ಎ ಹೆಗ್ಡೆ ರವರ ನೇತೃತ್ವದಲ್ಲಿ ಮಂಗಳೂರು ನಗರ ಸೆನ್ ಕ್ರೈಂ ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಸಿಬ್ಬಂದಿಯವರು ಪಾಲ್ಗೊಂಡಿದ್ದರು.